## ಕರ್ನಾಟಕ ಸರ್ಕಾರ

ಸಂಖ್ಯೆ: ಸಕನಿ/ಸಿಬ್ಬಂದಿ-8/ಸಿಆರ್-83/2020-21

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 18-01-2021

### ಅಧಿಕೃತ ಜ್ಞಾಪನ

ವಿಷಯ:- ಸಮಾಜ ಕಲ್ಯಾಣ ಇಲಾಖೆಯ ಸಂಚಾಲಕಿ ವೃಂದದ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ, ಉಳಿಕೆ ಮೂಲ ವೃಂದ ಹಾಗೂ ಮೂಲ ವೃಂದ (ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದಗಳ ಜಂಟಿ ವೃಂದ) ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ 01-01-2021 ರಲ್ಲಿದ್ದಂತೆ ಪ್ರಕಟಿಸುವ ಬಗ್ಗೆ

ಉಲ್ಲೇಖ:-
1) ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು 1957
2) ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 07 ಸೆನೆನಿ 96 ದಿನಾಂಕ 16-07-96
3) ಸರ್ಕಾರದ ಅಧಿಕೃತ ಜ್ಞಾಪನಾ ಸಂಖ್ಯೆ: ಸಿಆಸುಇ 32 ಸೆನೆನಿ 03 ದಿನಾಂಕ 10-06-03
4) ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 06 ಪಿಎಲ್ಎಕ್ಸ್ ದಿನಾಂಕ 06-11-2013
5) ಸರ್ಕಾರದ ಅಧಿಸೂಚನೆ-I ಸಂಖ್ಯೆ: ಡಿಪಿಎಆರ್ 43 ಹೆಚ್‌ಕೆಸಿ 2013 ದಿನಾಂಕ 29-01-2014

**********

ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮ 1957 ರ ನಿಯಮ 10 ರನ್ವಯ ಪ್ರತಿ ವರ್ಷ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ. ಉಲ್ಲೇಖ (2) & (3) ರ ಸರ್ಕಾರದ ಅಧಿಕೃತ ಜ್ಞಾಪನಾಗಳನ್ವಯ ದಿನಾಂಕ 01-01-2021 ರಲ್ಲಿದ್ದಂತೆ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಬೇಕಾಗಿರುತ್ತದೆ.

ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸಂಬಂಧಿಸಿದಂತೆ, ಉಲ್ಲೇಖ (4) ಮತ್ತು (5) ರ ಸಿಬ್ಬಂದಿ & ಆಡಳಿತ ಸುಧಾರಣಾ ಇಲಾಖೆರವರ ಅಧಿಸೂಚನೆಗಳನ್ವಯ ಸ್ಥಳೀಯ ವೃಂದ, ಉಳಿಕೆ ಮೂಲ ವೃಂದ ಮತ್ತು ಮೂಲ ವೃಂದ (ಕಲ್ಯಾಣ ಕರ್ನಾಟಕ ಪ್ರದೇಶ ಹಾಗೂ ಉಳಿಕೆ ಮೂಲ ವೃಂದದ ಜಂಟಿ ವೃಂದ) ದ ಜೇಷ್ಠತಾ ಪಟ್ಟಿಗಳನ್ನು ಪ್ರತಿ ವೃಂದದಲ್ಲಿ ನಿರ್ವಹಿಸಬೇಕಾಗಿರುತ್ತದೆ.

ಸಮಾಜ ಕಲ್ಯಾಣ ಇಲಾಖೆಯ ಸಂಚಾಲಕಿ ವೃಂದದ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ-ಅನುಬಂಧ 1, ಉಳಿಕೆ ಮೂಲ ವೃಂದ-ಅನುಬಂಧ 2 ಹಾಗೂ ಮೂಲ ವೃಂದ (ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ ಮತ್ತು ಉಳಿಕೆ ಮೂಲ ವೃಂದಗಳ ಜಂಟಿ ವೃಂದ) ಅನುಬಂಧ-3 ರಲ್ಲಿ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ದಿನಾಂಕ 01-01-2021 ರಲ್ಲಿದ್ದಂತೆ ಇಲಾಖಾ ವೆಬ್‌ಸೈಟ್ **www.sw.kar.nic.in** ನಲ್ಲಿ ಪ್ರಕಟಿಸಿದೆ. ಈ ತಾತ್ಕಾಲಿಕ ಜೇಷ್ಠತಾ ಪಟ್ಟಿಗಳನ್ನು ಇ-ಮೇಲ್ ಮೂಲಕ ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಡಾ: ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು / ಬುಡಕಟ್ಟುಗಳ ಆಯೋಗ, ಪರೀಕ್ಷಾ ಪೂರ್ವ ತರಬೇತಿ ಸಂಸ್ಥೆ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಸಮನ್ವಯಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ ರವರುಗಳಿಗೆ ಕಳುಹಿಸಲಾಗಿದೆ.